ಕರ್ನಾಟಕ ವಿಧಾನ ಸಭೆ

ಗುರುವಾರ 12ನೇ ಏಪ್ರಿಲ್ 2007 ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10 : 58 ಗಂಟೆಗೆ ಸಮಾವೇಶಗೊಂಡಿತು.

ಸಭಾಪತಿಯವರಾದ ಶ್ರೀ ಕೃಷ್ಣರವರು ಪೀಠವನ್ನು ಅಲಂಕರಿಸಿದ್ದರು.

(ಸದನವು ಬೆಳಿಗ್ಗೆ 10 ಗಂಟೆ 58 ನಿಮಿಷಕ್ಕೆ ಸಮಾವೇಶಗೊಂಡಾಗ ಸನ್ಮಾನ್ಯ ಸಭಾಧ್ಯಕ್ಷರು ಪೀಠವನ್ನು ಅಲಂಕರಿಸಿದ್ದರು)

1. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

ಅಧ್ಯಕ್ಷರು : – ಈಗ ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೇ, ದಿನಾಂಕ 30–10–2006 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ : ಇಡಿ 51 ಡಿಜಿಒ 2005 ಅನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ) ಯವರ ಪರವಾಗಿ ಶ್ರೀ ಎಂ.ಪಿ. ಪ್ರಕಾಶ್ (ಗೃಹ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು :– ಸನ್ಮಾನ್ಯ ಅಧ್ಯಕ್ಷರೆ,

ಕರ್ನಾಟಕ ಲೋಕಾಯುಕ್ತ ಅಧಿನಿಯಮ 1984ರ (ಕರ್ನಾಟಕ ಅಧಿನಿಯಮ 4/1985) ಸೆಕ್ಷನ್ 12(7)ರ ಪ್ರಕಾರ :

1. ಕರ್ನಾಟಕ ಲೋಕಾಯುಕ್ತದ 2005–06ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿ) :– ಇವರ ಪರವಾಗಿ ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :–

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ 1951ರ ಕಲಂ 37(7) ರ ಪ್ರಕಾರ :

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2005–06ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ. ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :– ಇವರ ಪರವಾಗಿ ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :–

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧಿನಿಯಮದ ಅಧಿನಿಯಮ 27(4)ರ ಪ್ರಕಾರ :

1. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು.

2. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 2004–05ನೇ ಸಾಲಿನ ವಾರ್ಷಿಕ ವರದಿ.

3. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮಾನಸ ಗಂಗೋತ್ರಿ, ಮೈಸೂರಿನ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಎನ್. ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) :– ಇವರ ಪರವಾಗಿ ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :–

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 1950ರ ಅಧಿನಿಯಮ 33(2) 35ರ 8ನೇ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

1. ವಾಯುವ್ಯ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆ, ಹುಬ್ಬಳ್ಳಿಯ 2005–06ನೇ ಸಾಲಿನ 8ನೇ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಸಿ.ಎಂ. ಉದಾಸಿ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :–

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ಗದಗ ಜಿಲ್ಲಾ ಪಂಚಾಯತ್‌ನ 2005–06ನೇ ಸಾಲಿನ ವಾರ್ಷಿಕ ಆಡಳಿತ ವರದಿ.

2. ಚಾಮರಾಜನಗರ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧನಾ ವರದಿ.

3. ಮೈಸೂರು ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನ ವರದಿ.

4. ಬೀದರ್ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ.

5. ಶಿವಮೊಗ್ಗ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ವರದಿ.

6. ರಾಯಚೂರು ಜಿಲ್ಲಾಪಂಚಾಯತ್‌ನ 2004–05ನೇ ಸಾಲಿನ ಲೆಕ್ಕಪತ್ರಗಳು ಹಾಗೂ ಲೆಕ್ಕಪರಿಶೋಧನಾ ವರದಿ.

7. ಬಳ್ಳಾರಿ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಸಚಿವರು) ಇವರ ಪರವಾಗಿ ಶ್ರೀ ಎಂ.ಪಿ.ಪ್ರಕಾಶ್ (ಗೃಹ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :–

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 2005–06ನೇ ಸಾಲಿನ 30ನೇ ವಾರ್ಷಿಕ ವರದಿ ಹಾಗೂ ಲೆಕ್ಕ ಪರಿಶೋಧನಾ ವರದಿ.

2. ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ನಿಯಮಿತದ 2005–06ನೇ ಸಾಲಿನ 42ನೇ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಎಂ.ಪಿ. ಪ್ರಕಾಶ್ :– ಅಧ್ಯಕ್ಷರೇ ಶ್ರೀ ಬಿ. ಶ್ರೀರಾಮುಲು ಅವರ ಹೆಸರಿನ ಮುಂದಿರುವ ಕಾಗದಪತ್ರಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಶ್ರೀ ಹೆಚ್.ಕೆ. ಕುಮಾರಸ್ವಾಮಿ – ಗೈರು – ಅವರ ಪರವಾಗಿ

ಶ್ರೀ ಎಂ.ಪಿ. ಪ್ರಕಾಶ್ :– ಅಧ್ಯಕ್ಷರೇ, ಶ್ರೀ ಹೆಚ್.ಕೆ. ಕುಮಾರಸ್ವಾಮಿಯವರ ಹೆಸರಿನ ಮುಂದಿರುವ ಕಾಗದಪತ್ರಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು :– ಮುಂದಿಡಲಾಯಿತು.

2. ಅರ್ಜಿಗಳನ್ನೊಪ್ಪಿಸುವುದು.

ಅಧ್ಯಕ್ಷರು :– ಶ್ರೀ ಹೆಚ್.ಡಿ. ಬಸವರಾಜು ಅವರ ಹೆಸರಿನ ಮುಂದಿರುವ ಅರ್ಜಿಯನ್ನು ಶ್ರೀಯುತರು ಗೈರು ಇರುವುದರಿಂದ ಅವರ ಪರವಾಗಿ ಸಭೆಯ ಮುಂದೆ ಒಪ್ಪಿಸಲಾಗಿದೆ.

3. ನಿಲುವಳಿ ಸೂಚನೆಗೆ ಅನುಮತಿ ಕೋರಿ ಚರ್ಚೆ

ವಿಷಯ :– ರಾಜ್ಯದಲ್ಲಿ ಬರಗಾಲ ಉಂಟಾಗಿರುವ ಬಗ್ಗೆ ಮತ್ತು ಕಬ್ಬು ಬೆಳೆದ ರೈತರು ಕಷ್ಟದಲ್ಲಿರುವ ಬಗ್ಗೆ.

ಶ್ರೀ ಧರಂ ಸಿಂಗ್ (ವಿರೋಧ ಪಕ್ಷದ ನಾಯಕರು) :– ಅಧ್ಯಕ್ಷರೇ ಮೇಲ್ಮನೆ ಸಹ ನಡೆದಿದೆ. ಒಂದು ವೇಳೆ ಯಾವುದೇ ಸಚಿವರು ಬೇರೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೆ ಅವರ ಪರವಾಗಿ ಕಾಗದಪತ್ರವನ್ನು ಬೇರೆಯವರು ಮಂಡಿಸಬಹುದು. ಬೀದರ್‌ನಲ್ಲಿ ವಿಕಾಸಯಾತ್ರೆ ಏನಿದೆ ಅಲ್ಲಿಗೆ ಎಲ್ಲಾ ಸಚಿವರ ದಂಡು ದಂಡೆ ಹೋಗಿದೆ. ಕಟ್ಟಾ ಸುಬ್ರಹ್ಮಣ್ಯ ನಾಯ್ಡು, ಉಪ ಮುಖ್ಯಮಂತ್ರಿ ಯಡಿಯೂರಪ್ಪನವರೂ ಅಲ್ಲಿದ್ದಾರೆ. ತಮ್ಮೆನುರಿಗೇ ಸಭೆಯಾಗಿದೆ, ಅವರು ಏನು ಹೇಳಿದ್ದರು, 9, 10 ನಮಗೆ ರಜೆ ಕೊಡಬೇಕು, ರಾಜನಾಥಸಿಂಗ್ ಬರುತ್ತಾರೆ, ನಾನೂ ಸಭೆಯಲ್ಲಿ ಪಾಲ್ಗೊಳ್ಳಬೇಕು ಅಂತ. ಎಲ್ಲಾ ಪಕ್ಷಗಳ ಸದಸ್ಯರೂ ಸಚಿವರಿದ್ದಾಗ ಏನೋ ಒಂದೆರಡು ದಿವಸ ಅವರ ಕಾರ್ಯಕ್ರಮವಿದ್ದಾಗ ಹೋಗುತ್ತಾರೆ. ಇವತ್ತು ಬೀದರ್ ಬೇರೆ ಕಡೆಯಲ್ಲಾ ಹೇಳಿಕೆ ಕೊಡುತ್ತಿದ್ದಾರೆ. ವಿಕಾಸಯಾತ್ರೆ ಹೋಗುತ್ತಿದೆ. ಅಲ್ಲಿ ನನ್ನ ತಾಲ್ಲೂಕಿನಲ್ಲಿ